ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ ಹನ್ನೆರಡನೇ ಪಟ್ಟಿಯಲ್ಲಿರುವ 35 ಪ್ರಶ್ನೆಗಳ ಪೈಕಿ 22 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಹುಬ್ಬಳ್ಳಿ ಧಾರವಾಡ ನಗರಕ್ಕೆ ಬರಗಾಲ ಪರಿಹಾರ ನಿಧಿಯಿಂದ ಬಿಡುಗಡೆಯಾದ ಹಣ

687 - ಶ್ರೀ ಅಶೋಕ್ ಕಾಟವೆ (ಹುಬ್ಬಳ್ಳಿನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1996-97ನೇ ಸಾಲಿನಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ನೀರಿನ ಅಭಾವವಿದ್ದಾಗ ಬರಗಾಲ ಪರಿಹಾರ ನಿಧಿಯಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು?*

ಆ) *ಈ ಹಣದಿಂದ ಎಷ್ಟು ಬೋರ್‌ವೆಲ್‌ಗಳನ್ನು ಹಾಕಲಾಗಿದೆ?*

ಇ) *ಈ ಹಣ ಸರಿಯಾಗಿ ವಿನಿಯೋಗವಾಗಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) 1996-97ನೇ ಸಾಲಿನಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರಸಭೆ ವ್ಯಾಪ್ತಿಯ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೂ. 30.00 ಲಕ್ಷಗಳ ಅನುದಾನ ಒದಗಿಸಲಾಗಿತ್ತು.

ಆ) 74 ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ.

ಇ) ಹಣ ಸರಿಯಾಗಿ ವಿನಿಯೋಗವಾದ ಬಗ್ಗೆ ಆಯುಕ್ತರು, ಹುಬ್ಬಳ್ಳಿ-ಧಾರವಾಡ ಮಹಾನಗರ ಸಭೆ ಇವರು ರೂ. 26.04 ಲಕ್ಷಗಳ ಬಳಕೆ ಪ್ರಮಾಣಪತ್ರ ನೀಡಿದ್ದಾರೆ.

ಈ) ಉದ್ಭವಿಸುವುದಿಲ್ಲ.

ವಿವಿಧ ಇಲಾಖೆಗಳಿಂದ ಸಮಾಜ ಕಲ್ಯಾಣ ಇಲಾಖೆಗೆ ಹಣವನ್ನು ನೀಡುವುದು

688 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1997-98ನೇ ಸಾಲಿನಲ್ಲಿ ಯಾವ ಯಾವ ಇಲಾಖೆಗಳಿಂದ ಎಷ್ಟು ಹಣವನ್ನು ಕೂಡಿಸಿ ಸಮಾಜ ಕಲ್ಯಾಣ ಇಲಾಖೆಗೆ ಕೊಡಲು ನಿರ್ಣಯಿಸಲಾಗಿತ್ತು. 31-3-1998ರ ವರೆಗೆ ಕೂಡಿಸಿಕೊಟ್ಟ ಹಣವೆಷ್ಟು?*

ಆ) *ಅದರಲ್ಲಿ 31-3-98 ವರೆಗೆ ಖರ್ಚು ಮಾಡಿದ ಹಣವೆಷ್ಟು?*